ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ತಿರುಮಲ-ತಿರುಪತಿಯಲ್ಲಿನ ಕರ್ನಾಟಕ ಛತ್ರದ ಮೂಲಭೂತ ಸೌಲಭ್ಯಗಳ ಕೊರತೆ ಕುರಿತು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

610 (798) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮುಜರಾಯಿ ಇಲಾಖಾ ವ್ಯಾಪ್ತಿಯಲ್ಲಿನ ತಿರುಪತಿ-ತಿರುಮಲ ಕರ್ನಾಟಕ ವಸತಿ ಗೃಹದ ನಿರ್ವಹಣೆಯನ್ನು ಯಾವ ಇಲಾಖೆಗೆ ವಹಿಸಲಾಗಿದೆ;

(ಆ) ಸದರಿ ವಸತಿ ಗೃಹದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕರ್ನಾಟಕದ ಭಕ್ತಾಧಿಗಳಿಗೆ ಪಾರದರ್ಶಕವಾಗಿ ಸದರಿ ವಸತಿ ಗೃಹದಲ್ಲಿ ಕೊಠಡಿಗಳು ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?